ಕೃಷಿ ವಿಶ್ವವಿದ್ಯಾಲಯ, ಧಾರವಾಡ

ಸಂ. ಡೀನ್ (ಕೃಷಿ)/TA–05/ 1329 /2020–21

ಡೀನ್ (ಕೃಷಿ)ರವರ ಕಛೇರಿ,
ಕೃಷಿ ಮಹಾವಿದ್ಯಾಲಯ,
ಧಾರವಾಡ– 580005
ದಿನಾಂಕ: 05.02.2021

ಅಧಿಸೂಚನೆ

ವಿಷಯ: ಜೈವಿಕ ತಂತ್ರಜ್ಞಾನ ವಿಭಾಗ, ಕೃಷಿ ಮಹಾವಿದ್ಯಾಲಯ, ಧಾರವಾಡದಲ್ಲಿ ಶಿಕ್ಷಕರ ತಾತ್ಕಾಲಿಕ ನೇಮಕಾತಿ ಮಾಡುವ ಕುರಿತು.

ಉಲ್ಲೇಖ: ಕುಲಸಚಿವರು ಕೃವಿವಿ, ಧಾರವಾಡ ಇವರ ಪರವಾನಿಗೆ ಪತ್ರದ ಸಂಖ್ಯೆ. R/R2P/R533/2020-21 Dtd. 25.01.2021

*****

ಮೇಲ್ಕಾಣಿಸಿದ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, IABT, ಜೈವಿಕ ತಂತ್ರಜ್ಞಾನ ವಿಭಾಗ, ಕೃಷಿ ಮಹಾವಿದ್ಯಾಲಯ, ಧಾರವಾಡದಲ್ಲಿ "Biotechnology Skill Enhancement Programme (BiSEP) To PG Diploma Programme" (ಲೆಕ್ಕ ಶೀರ್ಷಿಕೆ ಸಂಖ್ಯೆ: 5570/310) ರ ಅಡಿಯಲ್ಲಿ ಗುತ್ತಿಗೆ ಆಧಾರಿತ **"ಶಿಕ್ಷಕರ"** ಹುದ್ದೆಗೆ 179 ದಿವಸಗಳ ಅವಧಿಗೆ ಮೀರದಂತೆ ತಾತ್ಕಾಲಿಕವಾಗಿ ತೊಡಗಿಸಿಕೊಳ್ಳಲು ಈ ಕೆಳಕಾಣಿಸಿದ ವಿದ್ಯಾರ್ಹತೆಯನ್ನು ಹೊಂದಿರುವ, ಅರ್ಹ ಅಭ್ಯರ್ಥಿಗಳಿಂದ ನಿಗದಿತ ನಮೂನೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

Sl. No	Post	No. of the Post	Qualification	Consolidated Salary p.m
1	Teacher	01	Ph. D in Biotechnology / Molecular Biology and Biotechnology	Rs.50,000/-

ನೇಮಕಾತಿ ಪಡೆಯಲು ಬಯಸುವ ಅಭ್ಯರ್ಥಿಗಳು ಈ ಕೆಳಗೆ ನಮೂದಿಸಿದ ಅರ್ಜಿ ನಮೂನೆಯನ್ನು ಎರಡು ಪ್ರತಿಗಳೊಂದಿಗೆ **ದಿನಾಂಕ 22.02.2021 ರಂದು ಬೆಳಿಗ್ಗೆ 11.00 ಘಂಟೆಗೆ ಸಂದರ್ಶನಕ್ಕೆ,** ಡೀನ್(ಕೃಷಿ) ರವರ ಕಛೇರಿ, ಕೃಷಿ ಮಹಾವಿದ್ಯಾಲಯ, ಧಾರವಾಡದಲ್ಲಿ ಹಾಜರಾಗಲು ತಿಳಿಸಲಾಗಿದೆ. ಸಂದರ್ಶನಕ್ಕೆ ಬರುವಾಗ ತಮ್ಮ ವಿದ್ಯಾರ್ಹತೆಗೆ ಸಂಬಂಧಪಟ್ಟ ಎಲ್ಲ ಮೂಲ ದಾಖಲೆಗಳನ್ನು ಹಾಗೂ ಎರಡು ಪ್ರತಿಗಳನ್ನು ಸಂದರ್ಶನದ ಸಮಯದಲ್ಲಿ ತರಲು ತಿಳಿಸಲಾಗಿದೆ. **ಯಾವುದೇ ಸಂದರ್ಭದಲ್ಲಿ ಅರ್ಜಿಯನ್ನು ಮುಂಗಡವಾಗಿ ಕಳುಹಿಸಬಾರದು.**

ಸಂದರ್ಶನಕ್ಕೆ ಬರುವ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ಬಂದು ಹಾಜರಾಗಬೇಕು. ಸದರಿ ನೇಮಕಾತಿಯು ತಾತ್ಕಾಲಿಕವಾಗಿರುವುದರಿಂದ ಯಾವುದೇ ಸಮಯದಲ್ಲಿ ಕಾರಣ ತಿಳಿಸದೇ ಕೆಲಸದಿಂದ ತೆಗೆಯಬಹುದು. ಇದು ಕೃಷಿ ವಿಶ್ವವಿದ್ಯಾಲಯದ ಯಾವುದೇ ಖಾಯಂ ನೇಮಕಾತಿ ಹಕ್ಕಿಗೆ ಒಳಪಟ್ಟಿರುವುದಿಲ್ಲ.

ಡೀನ್(ಕೃಷಿ)
ಕೃಷಿ ಮಹಾವಿದ್ಯಾಲಯ,
ಧಾರವಾಡ

9/2

ಮುಂದುವರೆದಿದೆ.....

- ಕುಲಸಚಿವರು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು/ ರಾಯಚೂರ/ ಶಿವಮೊಗ್ಗಾ/ಯು.ಎಚ್.ಎಸ್. ಬಾಗಲಕೋಟ/ಕೆ.ವಿ.ಎ.ಎಫ್. ಎಸ್. ಯು, ಬೀದರ ಇವರಿಗೆ ಮಾಹಿತಿಗಾಗಿ ಮತ್ತು ಸದರಿ ವಿಷಯವನ್ನು ಎಲ್ಲರ ಸೂಕ್ತ ಮಾಹಿತಿಗಾಗಿ ಪ್ರಚಾರ ಮಾಡಲು ಕೋರಲಾಗಿದೆ.
- ಕುಲಸಚಿವರು, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ/ ಗುಲ್ಬರ್ಗಾ, ವಿಶ್ವವಿದ್ಯಾಲಯ, ಗುಲ್ಬರ್ಗಾ/ಮೈಸೂರ ವಿಶ್ವವಿದ್ಯಾಲಯ, ಮೈಸೂರ/ ಬೆಂಗಳೂರ ವಿಶ್ವವಿದ್ಯಾಲಯ, ಬೆಂಗಳೂರ/ಕುವೆಂಪು ವಿಶ್ವವಿದ್ಯಾಲಯ, ಶಿವಮೊಗ್ಗ/ ಮಂಗಳೂರು ವಿಶ್ವವಿದ್ಯಾಲಯ, ಮಂಗಳೂರು./ ಮಹಿಳಾ ವಿಶ್ವವಿದ್ಯಾಲಯ, ಬಿಜಾಪೂರ. ಇವರಿಗೆ ಮಾಹಿತಿಗಾಗಿ ಮತ್ತು ಸದರಿ ವಿಷಯವನ್ನು ಎಲ್ಲರ ಸೂಕ್ತ ಮಾಹಿತಿಗಾಗಿ ಪ್ರಚಾರ ಮಾಡಲು ಕೋರಲಾಗಿದೆ.
- ಗ್ರಂಥಪಾಲಕರು, ಕೃಷಿ ವಿಶ್ವವಿದ್ಯಾಲಯ, ಧಾರವಾಡ ಇವರಿಗೆ ಮಾಹಿತಿಗಾಗಿ ಮತ್ತು ಈ ವಿಷಯವನ್ನು ಕೃಷಿ ವಿಶ್ವವಿದ್ಯಾಲಯ, ಅಂತರ್ಜಾಲ ತಾಣದಲ್ಲಿ ಪ್ರಕಟಿಸಲು ಕೋರಲಾಗಿದೆ.
- ಜಿಲ್ಲಾ ವಾರ್ತಾ ಮತ್ತು ಪ್ರಚಾರ ಅಧಿಕಾರಿಗಳು, ವಾರ್ತಾ ಮತ್ತು ಪ್ರಚಾರ ಇಲಾಖೆ ಡಿ.ಸಿ. ಕೌಂಪೌಂಟ್, ಧಾರವಾಡ ಇವರಿಗೆ ಮಾಹಿತಿಗಾಗಿ ಮತ್ತು ಹೆಚ್ಚಿನ ರೀತಿಯಲ್ಲಿ ಪ್ರಚಾರ ಮಾಡಲು ಕೋರಲಾಗಿದೆ.

ಪ್ರತಿಯನ್ನು: ಕಾರ್ಯದರ್ಶಿ, ಕುಲಪತಿಗಳ ಕಛೇರಿ, ಕೃಷಿ ವಿಶ್ವವಿದ್ಯಾಲಯ, ಧಾರವಾಡ ಇವರಿಗೆ ಈ ಮಾಹಿತಿಯನ್ನು ಮಾನ್ಯ ಕುಲಪತಿಗಳ ಗಮನಕ್ಕೆ ತರಲು ಕೋರಲಾಗಿದೆ.

ಅನುಬಂಧ

ಫೋಟೊ

1. ಅಭ್ಯರ್ಥಿಯ ಹೆಸರು :

2. ವಿಳಾಸ ಮತ್ತು ಮೊಬೈಲ್ ಸಂಖ್ಯೆ :

3. ಜನ್ಮ ದಿನಾಂಕ :

4. ವಿದ್ಯಾರ್ಹತೆ :

5. ಜಾತಿಯ ವಿವರ :

6. ಅನುಭವ :

ಸೂಚನೆ: ದೃಢೀಕೃತ ದಾಖಲೆಗಳ ಕಟ್ಟು (Bind) ಮಾಡಿದ ಎರಡು ಪ್ರತಿಗಳನ್ನು ಸಂದರ್ಶನಕ್ಕೆ ಬರುವಾಗ ಕಡ್ಡಾಯವಾಗಿ ತರತಕ್ಕದ್ದು